## ಹಿಂಬರಹ

ಸಂಖ್ಯೆ: ಡಿಟಿಇ 01 ಇಎಸ್‌ಟಿ(9) 2017 / 2199 ದಿನಾಂಕ: 09-11-2017

ಕರ್ನಾಟಕ ರಾಜ್ಯದ ಅಂಗವಿಕಲ ವ್ಯಕ್ತಿಗಳ ಅಧಿನಿಯಮ 1995ರ ಆಯುಕ್ತರ ಕಛೇರಿ ಬೆಂಗಳೂರು ಇವರ ಪತ್ರ ಸಂಖ್ಯೆ:ಅಂಅನಿ/ವಿ-2/07/2017-18/333 ದಿನಾಂಕ:07-07-2017 ಕರ್ನಾಟಕ ಸರ್ಕಾರದ ಪತ್ರ ಸಂಖ್ಯೆ: ಇಡಿ 97 ವಿವಿಧ 2017 ಬೆಂಗಳೂರು ದಿನಾಂಕ: 16/10/2017 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 97 ವಿವಿಧ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:16/10/2017.

**ಇಂದ,**
ಸರ್ಕಾರದ ಪ್ರಧಾನ ಕಾರ್ಯದರ್ಶಿ.
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು.

759
3/11/17

**ಇವರಿಗೆ,**

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ಆಡಳಿತಾಧಿಕಾರಿ, ಎನ್.ಸಿ.ಸಿ. ನಿರ್ದೇಶನಾಲಯ, ಬೆಂಗಳೂರು.
4. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056.
5. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು-570 005.
6. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580 003.
7. ಕುಲಸಚಿವರು, ಗುಲ್ಬರ್ಗ ವಿಶ್ವವಿದ್ಯಾಲಯ, ಗುಲ್ಬರ್ಗ-585 106.
8. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು-574 199.
9. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಬಿ.ಆರ್. ಪ್ರಾಜೆಕ್ಟ್-577 451.
10. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು-572 101
11. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ-583 276.
12. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು-570 006.
13. ಕುಲಸಚಿವರು, ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರ-586 101
14. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾಂ-590 014.
15. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾಂ.
16. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ
17. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
18. ಕುಲಸಚಿವರು, ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
19. ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು -560 018.
20. ಕುಲಸಚಿವರು, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ವಿಜಯನಗರ, ಬೆಂಗಳೂರು.

JD(Ad) / Reg (Ad)

ಮಾನ್ಯರೇ,

ವಿಷಯ: "ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016"ರ ಕಲಂ 37ನ್ನು ಅನುಷ್ಠಾನಗೊಳಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಆಯುಕ್ತರು, ರಾಜ್ಯ ಅಂಗವಿಕಲ ವ್ಯಕ್ತಿಗಳ ಅಧಿನಿಯಮ 1995ರ ಆಯುಕ್ತರ ಕಛೇರಿ-ಕರ್ನಾಟಕ, ಬೆಂಗಳೂರು, ಇವರ ದಿನಾಂಕ:07.07.2017ರ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ವಿಕಲಚೇತನ ವ್ಯಕ್ತಿಗಳ ಹಕ್ಕುಗಳ

PC-1459
3/11/17

ಸಂರಕ್ಷಣೆ, ಸಮಾನ ಅವಕಾಶ ಮತ್ತು ಪೂರ್ಣ ಭಾಗವಹಿಸುವಿಕೆಗಾಗಿ ಭಾರತ ಸರ್ಕಾರವು "ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016"ನ್ನು ಭಾರತ ಸರ್ಕಾರದ ಗೆಜೆಟ್ ಅಧಿಸೂಚನೆ ದಿನಾಂಕ:28.12.2016ರಲ್ಲಿ ಅಧಿಸೂಚಿಸಿದ್ದು, ಸದರಿ ಅಧಿನಿಯಮದ 17 ಅಧ್ಯಾಯಗಳಲ್ಲಿ 101 ಕಲಂಗಳ ಮೂಲಕ ಕಾಯ್ದೆಗಳನ್ನು ರೂಪಿಸಲಾಗಿದ್ದು, ಸರ್ಕಾರ ಹಾಗೂ ನಿಗಮ ಮಂಡಳಿಗಳಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಅಭಿವೃದ್ಧಿ ಮತ್ತು ಬಡತನ ನಿರ್ಮೂಲನೆಯ ಕಾರ್ಯಕ್ರಮಗಳಲ್ಲಿ 2017-18ನೇ ಸಾಲಿನಿಂದ ಕಡ್ಡಾಯವಾಗಿ ಕನಿಷ್ಠ ಶೇ.5ರಷ್ಟನ್ನು ವಿಕಲಚೇತನರಿಗೆ ಮೀಸಲಿರಿಸಲು ಹಾಗೂ ಕಾಯ್ದೆಯ ಆಶಯದಂತೆ ಕಾರ್ಯಕ್ರಮಗಳನ್ನು ಜಾರಿಗೊಳಿಸುವಂತೆ ಕೋರಿದ್ದು, ಈ ಬಗ್ಗೆ ಕಾಯ್ದೆಯ ಆಶಯದಂತೆ ಮುಂದಿನ ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ಹಾಗೂ ಕೈಗೊಂಡ ಕ್ರಮದ ಮಾಹಿತಿಯನ್ನು ಸಲ್ಲಿಸುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

11/10

(ಎಂ.ಎ ಅಹಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ವಿಶ್ವವಿದ್ಯಾಲಯ-2 & ಸಾಮಾನ್ಯ-2).

ಕರ್ನಾಟಕ ಸರ್ಕಾರ

# ರಾಜ್ಯ ಅಂಗವಿಕಲ ವ್ಯಕ್ತಿಗಳ ಅಧಿನಿಯಮ 1995ರ ಆಯುಕ್ತರ ಕಛೇರಿ - ಕರ್ನಾಟಕ

(ಕೇಂದ್ರದ ಅಧಿನಿಯಮದಡಿ ಸ್ಥಾಪಿಸಲಾಗಿದೆ)

ನಂ. 55, 2ನೇ ಮಹಡಿ, "ಅಭಯ ಸಂಕೀರ್ಣ", ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಕಟ್ಟಡ, ರಿಸಲ್ದಾರ್ ರಸ್ತೆ,
ಶೇಷಾದ್ರಿಪುರಂ, ಬೆಂಗಳೂರು - 560 020, ದೂರವಾಣಿ ಸಂಖ್ಯೆ : 080-23462625, 23462659, 23462029
ಇ-ಮೇಲ್ : scdkarnataka@gmail.com, ಅಂತರ್ಜಾಲ : scd.kar.nic.in

---

ಸಂ:ಅಂಅನಿ:ವಿ-2:07:2017-18 / 333 ದಿನಾಂಕ 07-07-2017

ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/
ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳವರಿಗೆ
ಶಿಕ್ಷಣ ಇಲಾಖೆ (ಪ್ರಾ.ಶಿ) ಎಂ.ಎಸ್. ಬಿಲ್ಡಿಂಗ್ ಬೆಂಗಳೂರು.

ಮಾನ್ಯರೆ,

ವಿಷಯ :- "ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016" ರ ಕಲಂ.37ನ್ನು ಅನುಷ್ಠಾನಗೊಳಿಸುವ ಬಗ್ಗೆ

ಉಲ್ಲೇಖ :- ಭಾರತ ಸರ್ಕಾರದ ಗೆಜೆಟ್ ಅಧಿಸೂಚನೆ,ದಿನಾಂಕ: 28.12.2016.

********

ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಸಂರಕ್ಷಣೆ, ಸಮಾನ ಅವಕಾಶ ಮತ್ತು ಪೂರ್ಣ ಭಾಗವಹಿಸುವಿಕೆಗಾಗಿ ಭಾರತ ಸರ್ಕಾರವು "ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ, 2016" ನ್ನು ಉಲ್ಲೇಖಿತ ರಾಜ್ಯ ಪತ್ರದಲ್ಲಿ ಅಧಿಸೂಚಿಸಿದ್ದು, ಸದರಿ ಅಧಿನಿಯಮದ 17 ಅಧ್ಯಾಯಗಳಲ್ಲಿ 101 ಕಲಂಗಳ ಮೂಲಕ ಕಾಯ್ದೆಗಳನ್ನು ರೂಪಿಸಲಾಗಿದೆ. ಅದರನ್ವಯ ಈ ಕೆಳಕಂಡಂತೆ ಸೌಲಭ್ಯಗಳನ್ನು ಒದಗಿಸಬೇಕಾಗಿರುತ್ತದೆ.

1. ಸರ್ಕಾರವು ವಿಕಲಚೇತನರು ಸ್ವತಂತ್ರವಾಗಿ ಅಥವಾ ಸಮುದಾಯದಲ್ಲಿ ಗುಣಮಟ್ಟದ ಜೀವನ ನಡೆಸಲು ಅನುವಾಗುವಂತೆ ಯೋಜನೆ/ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಿ, ಸಹಾಯ ಒದಗಿಸುವಾಗ ವಿಕಲಚೇತನರಿಗೆ ನೀಡುವ ನೆರವಿನ ಪ್ರಮಾಣವು ಅಂತಹುದೇ ಯೋಜನೆಗಳಡಿ ಇತರರಿಗೆ ಒದಗಿಸುವ ನೆರವಿಗಿಂತ ಕನಿಷ್ಠ ಶೇ.25ರಷ್ಟಾದರೂ ಹೆಚ್ಚಿರಬೇಕು.
2. 6-18ವರ್ಷಗಳ ವಿಕಲಚೇತನ ಮಕ್ಕಳಿಗೆ ತಮ್ಮ ಆಯ್ಕೆಯ ನೆರೆಯ ಅಥವಾ ವಿಶೇಷ ಶಾಲೆಗಳಲ್ಲಿ ಉಚಿತ ಶಿಕ್ಷಣ ಹಾಗೂ ಉನ್ನತ ಶಿಕ್ಷಣದಲ್ಲಿ ಶೇ.5ಕ್ಕಿಂತ ಕಡಿಮೆಯಿಲ್ಲದಂತೆ ಮೀಸಲಾತಿ ಒದಗಿಸಬೇಕು.
3. ಸರ್ಕಾರಿ ಹುದ್ದೆಗಳಿಗೆ ನೇಮಕಾತಿಯಲ್ಲಿ ವಿಕಲಚೇತನರಿಗೆ ಕನಿಷ್ಠ ಶೇ.4ರಷ್ಟು ಮೀಸಲಾತಿ.
4. ಮನೆ, ಆಶ್ರಯ, ವೃತ್ತಿ, ವ್ಯಾಪಾರ, ಉದ್ದಿಮೆ, ಮನರಂಜನೆ, ಉತ್ಪಾದನಾ ಕೇಂದ್ರಗಳಿಗಾಗಿ ರಿಯಾಯಿತಿ ದರದಲ್ಲಿ ಭೂಮಿ ಹಂಚಿಕೆ ಮಾಡುವಾಗ ವಿಕಲಚೇತನರಿಗೆ ಶೇ.5ರಷ್ಟು ಮೀಸಲಾತಿ
5. ವಿಕಲಚೇತನರಿಗಾಗಿ ವಿಶೇಷ ಉದ್ಯೋಗ ವಿನಿಮಯ ಕೇಂದ್ರ, ಸಾರಿಗೆ ವ್ಯವಸ್ಥೆಯಲ್ಲಿ ರಿಯಾಯಿತಿ

ಹೀಗೆ ವಿಕಲಚೇತನರು ಶೋಷಣೆಗೆ ಒಳಗಾಗುವುದನ್ನು ತಪ್ಪಿಸಲು ಹಾಗೂ ಅವರು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಅವಕಾಶಗಳನ್ನು ಒದಗಿಸುವುದು ಆದ್ಯತೆಯ ಜವಾಬ್ದಾರಿಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸರ್ಕಾರ ಹಾಗೂ ನಿಗಮ, ಮಂಡಳಿಗಳಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಅಭಿವೃದ್ಧಿ ಮತ್ತು ಬಡತನ ನಿರ್ಮೂಲನೆಯ ಕಾರ್ಯಕ್ರಮಗಳಲ್ಲಿ 2017-18 ನೇ ಸಾಲಿನಿಂದ ಕಡ್ಡಾಯವಾಗಿ ಕನಿಷ್ಠ ಶೇಕಡ.5ರಷ್ಟನ್ನು ವಿಕಲಚೇತನರಿಗಾಗಿ ಮೀಸಲಿರಿಸಲು, ಮೇಲೆ ವಿವರಿಸಿರುವ ರೀತ್ಯಾ ಕಾಯ್ದೆಯ ಆಶಯದಂತೆ ಕಾರ್ಯಕ್ರಮಗಳನ್ನು ಜಾರಿಗೊಳಿಸಬೇಕಾಗಿ ತಮ್ಮನ್ನು ಕೋರಿದೆ.

ಇಂತಿ ತಮ್ಮ ವಿಶ್ವಾಸಿ,

(ಡಾ|| ಸಿದ್ದರಾಜು)
ಆಯುಕ್ತರು

ಪ್ರತಿಗಳನ್ನು ಅಗತ್ಯ ಕ್ರಮಕ್ಕಾಗಿ

1. ಕರ್ನಾಟಕ ರಾಜ್ಯದ ಎಲ್ಲಾ ನಿಗಮ / ಮಂಡಳಿಗಳ ಅಧ್ಯಕ್ಷರು ಹಾಗೂ ಆಯುಕ್ತರು ಗಳವರಿಗೆ
2. ಎಲ್ಲಾ ಮಹಾನಗರ ಪಾಲಿಕೆಗಳ ಆಯುಕ್ತರುಗಳವರಿಗೆ
3. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳವರಿಗೆ
4. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳವರಿಗೆ.